# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ 136 ಜೆ.ಜೆ.ಆರ್ ನಗರ ಬೆಂಗಳೂರು

****************************************************************************

ಸಂಖ್ಯೆ: w-138/Committee/Proceding -31/2021-22 dt. 10-02-2022

## ಸಭೆಯ ನಡವಳಿಗಳು

10-02-2022 ರಂದು ಬೆಳಿಗ್ಗೆ 12.30 ಘಂಟೆಗೆ ವಾರ್ಡ್ ಸಂಖ್ಯೆ: 138 ಛಲವಾಧಿ ಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾದಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ 138 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನ ಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -138ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಗೈರು ಹಾಜರಾದ ವಾಹನ ಮತ್ತು ಕಾರ್ಮಿಕರ ವೇತನವನ್ನು ಕಡತಗೊಳಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು

Scanned with CamScanner

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು ಹಾಗೂ 2021-22ನೇ ಸಾಲಿನ ಕಾರ್ಯಕ್ರಮ ಪಟ್ಟಿಗಳಿಗೆ ಅಂದಾಜು ಪಟ್ಟಿ ತಯಾರಿಸಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ಕೋರಿ ಕಡತವನ್ನು ಸಲ್ಲಿಸಿರುವುದಾಗಿ ಸಭೆಯಲ್ಲಿ ವಿವರಣೆ ನೀಡಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಕಂಡುಬಂದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಪಿಸಿದರು.ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿ ಗುಂಡಿಗಳನ್ನು ಮುಚ್ಚಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್‌ಎಸ್‌ಬಿ ಆಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಾಂ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು.

ಬೆಸ್ಕಾಂ ಆಧಿಕಾರಿಯವರು ವಾರ್ಡ್ 138ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

----3

Scanned with CamScanner

ಮಾನ್ಯ ಅಧ್ಯಕ್ಷರು ಕಂದಾಯ ಅಧಿಕಾರಿಗಳಿಗೆ ಮತದಾನದ ಗುರ್ತಿನ ಚೀಟಿ ವಿತರಿಸುವ ಮತ್ತು ಹೊಸ ಮತದಾರರ ಗುರ್ತಿನ ಚೀಟಿ ನೋಂದಣಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಬಿ.ಬಿ.ಎಂ.ಪಿ ಚುನಾವಣೆಯು ಕೆಲವು ತಿಂಗಳುಗಳಲ್ಲಿ ನಡೆಯುವ ಸಾಧ್ಯತೆ ಇರುವುದರಿಂದ ಹೊಸದಾಗಿ ಮತದಾರರ ಗುರ್ತಿನ ಚೀಟಿ ನೊಂದಣಿ ಮತ್ತು ತಿದ್ದುಪಡಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಬಗ್ಗೆ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್–138 ಮತ್ತು ಕಂದಾಯ ಪರಿವೀಕ್ಷರು ವಾರ್ಡ್–138 ರವರುಗಳಿಗೆ ಕೋವಿಡ್–19 ಪೂರ್ಣ ಪ್ರಮಾಣದಲ್ಲಿ ತಗ್ಗಿದ್ದು, ವಾರ್ಡ್ ನಲ್ಲಿ ಲಸಿಕೆ ಅಭಿಯಾನ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಸಾರ್ವಜನಕರು ಸ್ವಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು ದಿನಗಳು ನಿಲ್ಲಿಸಿರುವ ವಾಹನಗಳನ್ನು ಕಾಮಗಾರಿ ಇಲಾಖೆ ಮತ್ತು ಪೊಲೀಸ್ ಇಲಾಖೆಯವರು ಗುರ್ತಿಸಿ ಸದರಿ ವಾಹನಗಳನ್ನು ಹಾರಜು ಪ್ರಕ್ರಿಯೆಯನ್ನು ಸರ್ಕಾರ ಗುರ್ತಿಸಿದ ವ್ಯಕ್ತಿಗಳಿಂದ ಮಾಡಿಸುವ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಸದರಿ ವಿಷಯದ ಬಗ್ಗೆ ಪೊಲೀಸ್ ಇಲಾಖೆಯೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 138ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್–136ರ ಮಾರ್ಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 11500 ಎಸ್ ಡಬ್ಲೂಎಂ. ದಂಡ ರೂ. 7500 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

--4

Scanned with CamScanner

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ. ಮೊಹಮ್ಮದ್ ಜಾಫರ್ ಸಾದಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ದೂ.ಸಂಖ್ಯೆ | ಅಧ್ಯಕ್ಷರು | [signature] |
| 2 | ಶ್ರೀ ಗಿರಿಧರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 138, ಬಿ.ಬಿ.ಎಂ.ಪಿ. ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್, ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ -138 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | [signature] |
| 6 | ಶ್ರೀ ಮೊಹಮದ್ ಸಾಧೀಕ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | [signature] |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | [signature] |
| 8 | ಶ್ರೀ ಶಿವಯ್ಯ (ಆರ್.ಐ) 9480685303 ಕಂದಾಯ ಪರಿವೀಕ್ಷಕರು | ಸದಸ್ಯರು | [signature] |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | [signature] |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | [signature] |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂತರರು . (ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | [signature] |

[signature]

ಕಾರ್ಯದರ್ಶಿಗಳು

ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138

ವಾರ್ಡ್ ಹಂತದ ಸಮಿತಿ

[signature]

ಅಧ್ಯಕ್ಷರು

ಹಾಗೂ ನೋಡಲ್ ಅಧಿಕಾರಿ

ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138

Scanned with CamScanner